ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ಜಿಲ್ಲಾಧಿಕಾರಿಯವರ ಅಧೀನದಲ್ಲಿರುವ ವಿವಿಧ ಲೆಕ್ಕಶೀರ್ಷಿಕೆಯಲ್ಲಿರುವ ಅನುದಾನದ ಬಳಕೆ ಕುರಿತು

ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು) :-

309 (467) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಜಿಲ್ಲಾಧಿಕಾರಿಗಳ ವ್ಯಾಪ್ತಿಗೆ ಒಳಪಡಿಸಿರುವ ವಿವಿಧ ಲೆಕ್ಕಶೀರ್ಷಿಕೆಗಳು ಯಾವುವು ; ಅವುಗಳಲ್ಲಿ ಕೋವಿಡ್-19ರ ನಿಯಂತ್ರಣಕ್ಕಾಗಿ ಲಾಕ್‌ಡೌನ್ ಜಾರಿಗೆ ಬಂದ ದಿನಾಂಕದಂದು ಲಭ್ಯವಿದ್ದ ಅನುದಾನದ ಮೊತ್ತವೆಷ್ಟು ; (ಜಿಲ್ಲಾವಾರು, ಲೆಕ್ಕಶೀರ್ಷಿಕೆವಾರು ಮಾಹಿತಿಯನ್ನು ಒದಗಿಸುವುದು)

(ಆ) ಕೋವಿಡ್-19ರ ನಿಯಂತ್ರಣಕ್ಕಾಗಿ ಲಾಕ್‌ಡೌನ್ ಜಾರಿಗೆ ಬಂದ ದಿನಾಂಕದ ನಂತರ ಈ ಲೆಕ್ಕಶೀರ್ಷಿಕೆಯಲ್ಲಿ ಬಿಡುಗಡೆಯಾದ ಅನುದಾನವೆಷ್ಟು; ಅವುಗಳಲ್ಲಿ ಮಾಡಿದ ವೆಚ್ಚವೆಷ್ಟು ; ಉಳಿಕೆಯಾಗಿರುವ ಅನುದಾನವೆಷ್ಟು ; ಬಿಡುಗಡೆಗೆ ಬಾಕಿಯಿರುವ ಅನುದಾನದ ಮೊತ್ತವೆಷ್ಟು ; (ಜಿಲ್ಲಾವಾರು, ಲೆಕ್ಕಶೀರ್ಷಿಕೆವಾರು ಮಾಹಿತಿಯನ್ನು ಒದಗಿಸುವುದು)

(ಇ) ಕೋವಿಡ್-19ರ ನಿಯಂತ್ರಣಕ್ಕಾಗಿ ಲಾಕ್‌ಡೌನ್ ಜಾರಿಗೆ ಬಂದ ದಿನಾಂಕದ ನಂತರ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಮುಖ್ಯಮಂತ್ರಿಗಳ ಪರಿಹಾರ ನಿಧಿಗಾಗಿ ಸ್ವೀಕೃತವಾದ ದೇಣಿಗೆಯ ಮೊತ್ತವೆಷ್ಟು ;

(ಈ) ಕೋವಿಡ್ ಸಂತ್ರಸ್ತರಿಗೆ ವಿತರಿಸಲು ಸಂಘ ಸಂಸ್ಥೆಗಳು ಮತ್ತು ದಾನಿಗಳಿಂದ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಸಂಗ್ರಹಿಸಿದ ದೇಣಿಗೆಯ ಮೊಬಲಗೆಷ್ಟು ಮತ್ತು ಸಂಗ್ರಹಿಸಿದ ಪರಿಹಾರ ಸಾಮಾಗ್ರಿಗಳು ಯಾವುವು; ಅವುಗಳ ಅಂದಾಜು ಮೌಲ್ಯವೆಷ್ಟು; ಅವುಗಳನ್ನು ಯಾವ ಕೇಂದ್ರಗಳಿಗೆ ವಿತರಿಸಲಾಗಿರುತ್ತದೆ ? (ಜಿಲ್ಲಾವಾರು, ತಿಂಗಳವಾರು ವಿವರವನ್ನು ನೀಡುವುದು)